# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 956* |
| ಸದಸ್ಯರ ಹೆಸರು | ಶ್ರೀ ಪ್ರದೀಪ್ ಶೆಟ್ಟರ್ |
| ಉತ್ತರಿಸುವ ದಿನಾಂಕ | 11.03.2026 |
| ಉತ್ತರಿಸುವವರು | ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಧಾರವಾಡ ನಗರ ಪ್ರದೇಶದಲ್ಲಿ ಮುಜರಾಯಿ ಇಲಾಖೆಯಡಿ ಬರುವ ದೇವಸ್ಥಾನಗಳ ಸಂಖ್ಯೆ ಎಷ್ಟು; | ಧಾರವಾಡ ನಗರ ಪ್ರದೇಶದಲ್ಲಿ 71 ಮುಜರಾಯಿ ದೇವಸ್ಥಾನಗಳಿರುತ್ತವೆ. |
| ಆ) | ಹುಬ್ಬಳ್ಳಿ ಸೆಂಟ್ರಲ್ ವಿಧಾನಸಭಾ ಕ್ಷೇತ್ರದಡಿ ಮುಜರಾಯಿ ಇಲಾಖೆಯಡಿ ಬರುವ ದೇವಸ್ಥಾನಗಳ ಸಂಖ್ಯೆ ಎಷ್ಟು ಹಾಗೂ ಸದರಿ ದೇವಸ್ಥಾನಗಳ ಅಭಿವೃದ್ಧಿ ಕಾರ್ಯಗಳಿಗೆ ಮಂಜೂರು ಮಾಡಲಾಗಿರುವ ಅನುದಾನವೆಷ್ಟು; | ಹುಬ್ಬಳ್ಳಿ ಸೆಂಟ್ರಲ್ ವಿಧಾನ ಸಭಾಕ್ಷೇತ್ರದ ವ್ಯಾಪ್ತಿಯಲ್ಲಿ ಮುಜರಾಯಿ ಇಲಾಖೆಯಡಿ 68 ದೇವಸ್ಥಾನಗಳು ಇರುತ್ತವೆ.<br>ಹುಬ್ಬಳ್ಳಿ ಸೆಂಟ್ರಲ್ ವಿಧಾನಸಭಾ ಕ್ಷೇತ್ರದಲ್ಲಿನ ಮುಜರಾಯಿ/ ಮುಜರಾಯೇತರ ದೇವಾಲಯಗಳಿಗೆ ದುರಸ್ಥಿ/ಜೀರ್ಣೋದ್ಧಾರ/ ನಿರ್ಮಾಣ /ಆರಾಧನಾ/ ಪರಿಶಿಷ್ಟ ಜಾತಿ ಉಪ ಯೋಜನೆ/ ಗಿರಿಜನ ಉಪ ಯೋಜನೆಗಳಡಿ ಪ್ರಸಕ್ತ ಸಾಲಿನಲ್ಲಿ ಒಟ್ಟು ರೂ.28.74 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.<br>**(ರೂ.ಲಕ್ಷಗಳಲ್ಲಿ)**<br>**ಯೋಜನೆ** — **2025-26**<br>ದುರಸ್ಥಿ/ಜೀರ್ಣೋದ್ಧಾರ/ನಿರ್ಮಾಣ — 25.00<br>ಆರಾಧನಾ ಯೋಜನೆ — 1.67<br>ಪರಿಶಿಷ್ಟ ಜಾತಿ ಉಪ ಯೋಜನೆ — 1.67<br>ಗಿರಿಜನ ಉಪ ಯೋಜನೆ — 0.40<br>**ಒಟ್ಟು** — 28.74<br>ಪ್ರವರ್ಗ "ಸಿ" ಶ್ರೇಣಿಯ ದೇವಾಲಯಗಳು/ ಧಾರ್ಮಿಕ ಸಂಸ್ಥೆಗಳು ಅಸ್ತಿತ್ವದಲ್ಲಿ ಇರುವವರೆಗೆ ಪ್ರತಿನಿತ್ಯದ ಪೂಜಾ ಕೈಂಕರ್ಯಕ್ಕಾಗಿ ಸರ್ಕಾರದ ಆದೇಶ ಸಂಖ್ಯೆ: ಕಂಇ 65 ಮುಅಬಿ 2025, ದಿನಾಂಕ:22.04.2025ರಂತೆ ವಾರ್ಷಿಕ ರೂ.72,000/-ಗಳ ಕನಿಷ್ಠ ತಸ್ತೀಕ್ ಮೊತ್ತವನ್ನು ಹಾಗೂ ಸರ್ಕಾರದ ಆದೇಶ ಸಂಖ್ಯೆ: ಕಂಇ 36 ಮುಅಬಿ 2025, ದಿನಾಂಕ:20.08.2025 ರನ್ವಯ ವಾರ್ಷಿಕ ರೂ.72,000/-ಗಳ ಕನಿಷ್ಠ ವರ್ಷಾಸನವನ್ನು ನೀಡಲಾಗುತ್ತಿದೆ. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | |
| ಇ) | ಹುಬ್ಬಳ್ಳಿಯ ಉಣಕಲ್‌ನಲ್ಲಿ ಬರುವ ಐತಿಹಾಸಿಕ ಚಂದ್ರಮೌಳೇಶ್ವರ ದೇವಸ್ಥಾನದ ಅಭಿವೃದ್ಧಿಗೆ ಬಿಡುಗಡೆ ಮಾಡಲಾಗಿರುವ ಅನುದಾನ ಎಷ್ಟು ಹಾಗೂ ಅಭಿವೃದ್ಧಿ ಕಾರ್ಯದ ಪ್ರಸ್ತುತ ಪ್ರಗತಿಯ ಸ್ಥಿತಿ ಏನು? | ಹುಬ್ಬಳ್ಳಿಯ ಉಣಕಲ್‌ನಲ್ಲಿರುವ ಐತಿಹಾಸಿಕ ಶ್ರೀ ಚಂದ್ರಮೌಳೇಶ್ವರ ದೇವಸ್ಥಾನವು ಧಾರ್ಮಿಕ ದತ್ತಿ ಇಲಾಖೆಯ ಆಡಳಿತಕ್ಕೆ ಒಳಪಟ್ಟ "ಸಿ" ಅಧಿಸೂಚಿತ ಸಂಸ್ಥೆಯಾಗಿರುತ್ತದೆ ಮತ್ತು ಕೇಂದ್ರ ಪುರಾತತ್ವ ಇಲಾಖೆಯ ನಿರ್ವಹಣೆಗೆ ಒಳಪಡುವ ಸಂರಕ್ಷಿತ ಸಂಸ್ಥೆಯಾಗಿರುತ್ತದೆ. ಸದರಿ ದೇವಾಲಯವು ಪುರಾತನ ಪ್ರಸಿದ್ಧ ದೇವಾಲಯವಾಗಿದ್ದು, ದೇವಾಲಯಕ್ಕೆ ಬರುವ ಭಕ್ತಾದಿಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವುದು ಅಗತ್ಯವಾಗಿರುತ್ತದೆ.<br><br>ಶ್ರೀ ಚಂದ್ರಮೌಳೇಶ್ವರ ದೇವಸ್ಥಾನವು ನಗರ ಪಾಲಿಕೆ ವ್ಯಾಪ್ತಿಯಲ್ಲಿದ್ದು, ಈ ದೇವಾಲಯಕ್ಕೆ ಅಗತ್ಯವಿರುವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಸ್ಥಳಾವಕಾಶದ ಕೊರತೆಯಿರುತ್ತದೆ. ದೇವಾಲಯದ ಅಭಿವೃದ್ಧಿಗೆ ಅಗತ್ಯವಿರುವ ಜಾಗವನ್ನು ಭೂ ಸ್ವಾಧೀನ ಮೂಲಕ ಪಡೆದು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಬೇಕಾಗಿರುತ್ತದೆ. ಈ ಸಂಬಂಧ ನಗರ ಪಾಲಿಕೆ ವತಿಯಿಂದ ರೂ.25.00 ಕೋಟಿಗಳ ಯೋಜನೆಯನ್ನು ಸಿದ್ಧಪಡಿಸಿದ್ದು, ಈ ಯೋಜನೆಗೆ ಅಗತ್ಯವಿರುವ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಮತ್ತು ಅನುದಾನ ಬಿಡುಗಡೆ ಕೋರಿ ಜಿಲ್ಲಾಧಿಕಾರಿ, ಧಾರವಾಡ ಜಿಲ್ಲೆ ಇವರಿಂದ ದಿ:12.02.2026ರಂದು ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು ಇವರಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ.<br><br>ಈ ಯೋಜನೆಗೆ ನಗರಾಭಿವೃದ್ಧಿ ಇಲಾಖೆಯಿಂದ ಆಡಳಿತಾತ್ಮಕ ಅನುಮೋದನೆ ದೊರೆತು ಅನುದಾನ ಬಿಡುಗಡೆಯಾದ ನಂತರ ಕೇಂದ್ರ ಪುರಾತತ್ವ ಇಲಾಖೆ, ಪ್ರವಾಸೋದ್ಯಮ ಇಲಾಖೆ ಹಾಗೂ ಸ್ಥಳೀಯ ಸಂಸ್ಥೆಗಳ ಸಹಯೋಗದೊಂದಿಗೆ ದೇವಾಲಯದ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವ ನಿಟ್ಟಿನಲ್ಲಿ ಪರಿಶೀಲಿಸಲಾಗುವುದು. |

ಸಂಖ್ಯೆ: ಕಂಇ 35 ಮುಸಪ್ರ 2026

**(ರಾಮಲಿಂಗಾರೆಡ್ಡಿ)**

ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು